Bruhat Bengaluru Mahanagara Palike

# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ:ಬಿಬಿಎಂಪಿ/ವಾ.22/ಜೆ.ಸಿ ಉ/ಪಿಆರ್/32/2020-21

ಸಹಾಯಕ ಅಭಿಯಂತರರ ಕಛೇರಿ
ಜೆ.ಸಿ ನಗರ ಉಪ-ವಿಭಾಗ, ಪೂರ್ವ ವಿಭಾಗ
ವಿ. ನಾಗೇನಹಳ್ಳಿ, ವಾರ್ಡ್ ನಂ:22
ಬೆಂಗಳೂರು-560032

ದಿನಾಂಕ:23-07-2021.

## ದಿನಾಂಕ: 23-07-2021 ರಂದು ವಾರ್ಡ್ ಸಮಿತಿಯ ಸಭೆಯ ನಡವಳಿಗಳು:-

- ಶ್ರೀ. ರಾಮಕೃಷ್ಣರೆಡ್ಡಿ, ಕಾರ್ಯಪಾಲಕ ಅಭಿಯಂತರರು, ನೋಡೆಲ್ ಅಧಿಕಾರಿಗಳು ಹಾಗೂ ಅಧ್ಯಕ್ಷರು ವಾರ್ಡ್ ಸಮಿತಿ.
- ಶ್ರೀ. ಗುರುಸಿದ್ದಪ್ಪ .ಜಿ ಸಹಾಯಕ ಅಭಿಯಂತರರು ಹಾಗೂ ವಾರ್ಡ್ ಸಮಿತಿ ಕಾರ್ಯದರ್ಶಿ
- ಶ್ರೀಮತಿ ಉಷಾರಾಣಿ, ಹಿರಿಯ ಆರೋಗ್ಯ ಪರೀವೀಕ್ಷಕರು, ಘನತ್ಯಾಜ್ಯ
- ಶ್ರೀ. ಶಿವನಾಯಕ್, ಕಿರಿಯ ಆರೋಗ್ಯ ಪರಿವೀಕ್ಷಕರು, ಘನತ್ಯಾಜ್ಯ
- ಶ್ರೀಮತಿ ಉಷಾರಾಣಿ, ಸಮಾಜ ಕಲ್ಯಾಣ ಇಲಾಖೆ
- ಶ್ರೀ ಡೇವಿಡ್ ಫೆರ್ನಾಂಡಿಸ್, ವಸತಿ ಸೇವಾಭಿವೃದ್ದಿ ಸಂಘ ಸದಸ್ಯರು
- ಶ್ರೀ. ಚಂದ್ ಪಾಷ, K.R.W.A ಸದಸ್ಯರು

ವಾರ್ಡ್ ಸಮತಿ ಸಭೆಯನ್ನು ವಾರ್ಡ್ ಸಮಿತಿ ಕಾರ್ಯದರ್ಶಿಗಳಾದ ಶ್ರೀ. ಗುರುಸಿದ್ದಪ್ಪ .ಜಿ ವಾರ್ಡ್ ಸಮಿತಿ ಅಧ್ಯಕ್ಷರು, ಸಮಿತಿಯ ಸದಸ್ಯರುಗಳು ಹಾಗೂ ವಾರ್ಡ್ ಸಂಖ್ಯೆ: 22ರ ನಾಗರೀಕರು ಹಾಗೂ ಎಲ್ಲಾ ವೃಂದದ ಅಧಿಕಾರಿಗಳನ್ನು ಸ್ವಾಗತಿಸುತ್ತಾ, ಸಭೆಯನ್ನು ಪ್ರಾರಂಭಿಸಿದರು.

ಶ್ರೀ. ರಾಮಕೃಷ್ಣರೆಡ್ಡಿ, ನೋಡೆಲ್ ಅಧಿಕಾರಿಗಳು ಸಭೆಗೆ ಹಾಜರಿದ್ದ ಅಧಿಕಾರಿಗಳ ಪರಿಚಯ ಮಾಡಿಕೊಳ್ಳುವುದರ ಮುಖಾಂತರ ಸ್ವಾಗತವನ್ನು ಕೋರಿದರು, ಹಾಗೂ ವಾರ್ಡಿಗೆ ಸಂಬಂಧಿಸಿದ ವಿಷಯಗಳ ಬಗ್ಗೆ ಚರ್ಚಿಸಲು ಎಲ್ಲರನ್ನು ಕೋರಿ ಸಭೆಯಲ್ಲಿ ನಡೆಯುವ ನಡವಳಿಗಳನ್ನು ನಮೂದಿಸಲು ತಿಳಿಸಿದರು. ಹಾಗೂ ಕಮಿಟಿ ಕಾರ್ಯದರ್ಶಿಗಳು ಮಾತನಾಡುತ್ತಾ ದಿನಾಂಕ; 05-06-2021 ರಂದು ನಡೆದ ವಾರ್ಡ್ ಸಮಿತಿಯ

ನಡವಳಿಗಳನ್ನು ಪುನರಾವಲೋಕನ ಮಾಡಲಾಯಿತು. ಹಿಂದಿನ ಸಭೆಯಲ್ಲಿ ತೆಗೆದುಕೊಂಡಿದ್ದ ತೀರ್ಮಾನಗಳನ್ನು ಕುರಿತು ಈ ದಿನಾಂಕದವರೆಗೆ ನಿರ್ವಹಿಸಿದ ಕೆಲಸಗಳ ಬಗ್ಗೆ ಸದಸ್ಯರುಗಳಿಗೆ ತಿಳಿಸಲಾಯಿತು.

- ನೋಡೆಲ್ ಅಧಿಕಾರಿಗಳು ಮಾತನಾಡುತ್ತಾ, ವಾರ್ಡಿನಲ್ಲಿರುವ ಎಲ್ಲಾ ತಗ್ಗುಪ್ರದೇಶಗಳಲ್ಲಿ ಮಳೆ ನೀರಿನಿಂದ ಉಂಟಾಗಿರುವ ಸಮಸ್ಯೆಗಳನ್ನು ತಡೆಗಟ್ಟುವ ಬಗ್ಗೆ ಚರ್ಚಿಸಲಾಯಿತ್ತು.
- ಶ್ರೀ ಚಂದ್ ಪಾಷ, K.R.W.A ಸದಸ್ಯರು ಮಾತನಾಡುತ್ತಾ, ಕನಕನಗರದ 7ನೇ ಕ್ರಾಸ್ ಹಾಗೂ 20ನೇ ಕ್ರಾಸ್ ನ ರಸ್ತೆಗಳಲ್ಲಿ street light ಗಳು ಹಾಳಾಗಿದ್ದು, ಅದಕ್ಕೆ ಸಂಬಂಧಪಟ್ಟ ಅಧಿಕಾರಿಗಳಿಗೆ ತಿಳಿಸಿ stree light ಗಳನ್ನು ಸರಿಪಡಿಸುವಂತೆ ತಿಳಿಸಿದರು.
- ಶ್ರೀ ಗುರುಸಿದ್ದಪ್ಪ, ಸಹಾಯಕ ಅಭಿಯಂತರರು ಮಾತನಾಡುತ್ತಾ, 17ನೇ ಮತ್ತು 18ನೇ ಕ್ರಾಸ್ ರಸ್ತೆಗಳಲ್ಲಿ ಮರು ಡಾಂಬರೀಕರಣ ಮಾಡುವ ಬಗ್ಗೆ ನೋಡೆಲ್ ಅಧಿಕಾರಿಗಳೊಂದಿಗೆ ಚರ್ಚಿಸಲಾಯಿತ್ತು.
- ಶ್ರೀಮತಿ.ಉಷಾರಾಣಿ, ಹಿರಿಯ ಆರೋಗ್ಯ ಪರಿವೀಕ್ಷಕರು ಮಾತನಾಡುತ್ತಾ, ವಾರ್ಡ್ ವ್ಯಾಪ್ತಿಯಲ್ಲಿ ಕೋವಿಡ್-19+ve ಕೇಸ್ ಗಳು ಹೆಚ್ಚಾಗುತ್ತಿರುವುದರಿಂದ ವ್ಯಾಷಿನೇಶನ್ ಬಗ್ಗೆ ನೋಡೆಲ್ ಅಧಿಕಾರಿಗಳೊಂದಿಗೆ ಚರ್ಚಿಸಲಾಯಿತ್ತು. ಹಾಗೂ ಅಕ್ಟೋಬರ್ ತಿಂಗಳವರೆಗೆ 45 ವರ್ಷ ಮೇಲ್ಪಟ್ಟ ಜನರಿಗೆ ಮೊದಲ ಹಾಗೂ ಎರಡನೇ ಡೋಸ್ ವ್ಯಾಷಿನೇಶನ್ ಗಳನ್ನು ಕೋಡುವುದಾಗಿ ತಿಳಿಸಿದರು. ಹಾಗೂ ಆರೋಗ್ಯ ಇಲಾಖೆಯಲ್ಲಿರುವ ಅನುಕೂಲತೆಗಳು ತಿಳಿಸಿದರು.
- ವಾರ್ಡಿನಲ್ಲಿ 12% ವ್ಯಾಷಿನೇಶನ್ ಗಳನ್ನು ಹಾಕಲಾಗಿದ್ದು, ಮತ್ತು ವಾರ್ಡಿನಲ್ಲಿ ಮತ್ತೆ ಕೋವಿಡ್-19 +ve ಕೇಸ್ ಗಳನ್ನು ಹೆಚ್ಚಾಗುತ್ತಿದ್ದು, ಈಗಾಗಲೇ ವಾರ್ಡ್ ನ ವ್ಯಾಪ್ತಿಯಲ್ಲಿ ಹೊಸದಾಗಿ 5 ಕೋವಿಡ್-19 +ve ಕೇಸ್ ಗಳು ಪತ್ತೆಯಾಗಿರುವ ಬಗ್ಗೆ ತಿಳಿಸಿದರು.
- ವಾರ್ಡಿನಲ್ಲಿ ಈಗಾಗಲೇ ಕೋವಿಡ್ ವ್ಯಾಷಿನೇಶನ್ 2ನೇ ಡೋಸ್ ಗಳನ್ನು 45 ವರ್ಷ ಮೇಲ್ಪಟ್ಟವರಿಗೆ ಹಾಗೂ 18 ಮೇಲ್ಪಟ್ಟವರಿಗೂ ಕೂಡ ಕೋವಿಡ್ ವ್ಯಾಷಿನೇಶನ್ ಗಳನ್ನು ಪ್ರತಿದಿನ ಹಾಕಲಾಗುತ್ತಿರುವ ಬಗ್ಗೆ ಮಾಹಿತಿ ನೀಡಿದರು.
- ವಾರ್ಡ್ ವ್ಯಾಪ್ತಿಯ ಮುಖ್ಯ ಹಾಗೂ ಅಡ್ಡರಸ್ತೆಗಳಲ್ಲಿ ಘನತ್ಯಾಜ್ಯ ಇಲಾಖೆಯವರಿಂದ ಕಸ ವಿಲೇವಾರಿ ಮಾಡುವ ಬಗ್ಗೆ ಹಾಗೂ ಅಲ್ಲಲ್ಲಿ Block spotಗಳಲ್ಲಿ ಕಸ ವಿಂಗಡಣೆ ಮಾಡಿ ಸರಿಯಾದ ರೀತಿಯಲ್ಲಿ ಕಸ ವಿಲೇವರಿ ಮಾಡುವ ಬಗ್ಗೆ ಚರ್ಚಿಸಲಾಯಿತ್ತು.
- ನೋಡೆಲ್ ಅಧಿಕಾರಿಗಳು ಮಾತನಾಡುತ್ತಾ, ಖಾತಾವರ್ಗಾವಣೆ, ಖಾತಾನೋಂದಣಿ, ತೆರಿಗೆಹಣಪಾವತಿ, ಹೊಸದಾಗಿ ಚುನಾವಣೆ ಗುರುತೀನ ಚೀಟಿ ಮಾಡುವ ಬಗ್ಗೆ ಹಾಗೂ ಇನ್ನಿತರ ಕಂದಾಯ ಪಾವತಿಗಳ ಬಗ್ಗೆ ಸಭೆಗೆ ಹಾಜರಿದ್ದ ಕಂದಾಯ ಇಲಾಖೆಯರೊಂದಿಗೆ ಹೆಚ್ಚಿನ ಕಾರ್ಯ ವಿಧಾನಗಳ ಬಗ್ಗೆ ಚರ್ಚಿಸಲಾಯಿತ್ತು.

- ಸಭೆಯಲ್ಲಿ ನೋಡೆಲ್ ಅಧಿಕಾರಿಗಳು ರಸ್ತೆಗಳಲ್ಲಿ ಅಲ್ಲಲ್ಲಿ ಗುಂಡಿಗಳನ್ನು ಬಿದ್ದಿರುವುದರಿಂದ ತಮ್ಮ ಮೇಲಾಧಿಕಾರಿಗಳಿಂದ ಅನುಮತಿ ಪಡೆದು ಗುಂಡಿಗಳನ್ನು ತುಂಬಲು ಸಭೆಗೆ ಹಾಜರಿದ್ದ ಸಹಾಯಕ ಅಭಿಯಂತರರಿಗೆ ಶೀಘ್ರವಾಗಿ ಗುಂಡಿಗಳನ್ನು ಮುಚ್ಚುವ ಬಗ್ಗೆ ಕ್ರಮಗೈಗೊಳ್ಳುವ ಬಗ್ಗೆ ತಿಳಿಸಿದರು.
- ನೋಡೆಲ್ ಅಧಿಕಾರಿಗಳು ಮಾತನಾಡುತ್ತಾ, Bescom ಇಲಾಖೆ, Bwssb ಇಲಾಖೆ ಮತ್ತು Traffic ಪೋಲೀಸ್ ಇಲಾಖೆಯವರು ಮುಂದಿನ ಸಭೆಯಲ್ಲಿ ತಪ್ಪದೇ ವಾರ್ಡ್ ಸಮಿತಿ ಸಭೆಗೆ ಹಾಜರಾಗಲು ನೋಟೀಸ್ ಅನ್ನು ನೀಡುವಂತೆ ತಿಳಿಸಿದರು.
- ಶ್ರೀಮತಿ ಉಷಾರಾಣಿ, ಕಲ್ಯಾಣ ಇಲಾಖೆ ರವರು ಮಾತನಾಡುತ್ತಾ, 2020-21ನೇ ಸಾಲಿನ ಯಾವುದಾದರು ಅನುದಾನದ ಯೋಜನೆಯಡಿಯಲ್ಲಿ ಬರುವ ಸೌಲಭ್ಯಗಳನ್ನು ಸಾರ್ವಜನಿಕರಿಗೆ ಒದಗಿಸುವ ಕೆಲಸ ಕಾರ್ಯಗಳನ್ನು ಕೈಗೊಳ್ಳುತ್ತೀರುವ ಬಗ್ಗೆ ತಿಳಿಸಿದರು.
- ವಾರ್ಡಿನಲ್ಲಿ ಕೋವಿಡ್-19+ve ಕೇಸ್ ಗಳು ಹೆಚ್ಚಾಗಿರುವುದರಿಂದ ಅದಕ್ಕೆ ಬೇಕಾದ ಕ್ರಮಗಳನ್ನು ಕೈಗೊಳ್ಳುತ್ತೀರುವ ಬಗ್ಗೆ ಚರ್ಚಿಸಲಾಯಿತ್ತು.
- ವಾರ್ಡ್ ವ್ಯಾಪ್ತಿಯಲ್ಲಿ ಬರುವ ಕೆಲವು ಅಡ್ಡರಸ್ತೆ ಹಾಗೂ ಮುಖ್ಯರಸ್ತೆಗಳಲ್ಲಿ ಸಿ.ಸಿ.ಟಿ.ವಿ ಕ್ಯಾಮೆರಾಗಳನ್ನು ಅಳವಡಿಸುವ ಕಾಮಗಾರಿಯು ಪ್ರಗತಿಯಲ್ಲಿರುವ ಬಗ್ಗೆ ತಿಳಿಸಿದರು.
- ಆರೋಗ್ಯ ಇಲಾಖೆ ಕಡೆಯಿಂದ ವಾರ್ಡಿನಲ್ಲಿರುವ ಹೋಟೆಲ್ ಗಳಲ್ಲಿ ಕೆಲಸ ಮಾಡುವ ಜನರಿಗೆ ವ್ಯಾಷಿನೇಶನ್ ಗಳನ್ನು ಪೂರೈಕೆ ಮಾಡುತ್ತೀರುವ ಬಗ್ಗೆ ತಿಳಿಸಿದರು ಹಾಗೂ ವಾರ್ಡಿನಲ್ಲಿ ಕಸನಿರ್ವಹಣೆ ಸರಿಯಾಗಿ ಆಗುತ್ತಿದ್ದು ಯಾವುದೇ ಸಮಸ್ಯೆ ಇರುವುದಿಲ್ಲ ಎಂದು ತಿಳಿಸಿದರು.
- ವಾರ್ಡ್ ವ್ಯಾಪ್ತಿಯಲ್ಲಿ ಬರುವ ಎಲ್ಲ ಮುಖ್ಯರಸ್ತೆ ಮತ್ತು ಅಡ್ಡರಸ್ತೆಗಳಿಗೆ ಕಡ್ಡಾಯವಾಗಿ ಸ್ಯಾನಿಟೈಸರ್ ಮಾಡಲಾಗುತ್ತಿದೆ ಎಂದು ಸಭೆಗೆ ಹಾಜರಾಗಿದ್ದ ಶ್ರೀಮತಿ ಉಷಾರಾಣಿ, ಹಿರಿಯ ಆರೋಗ್ಯ ಪರೀವೀಕ್ಷರು ತಿಳಿಸಿದರು.
- ವಾರ್ಡ್ ನ ವ್ಯಾಪ್ತಿಯಲ್ಲಿ ಬರುವ ಮುಖ್ಯರಸ್ತೆಯ ಬದಿಯಲ್ಲಿ ಪುಟ್ ಬಾತ್ ಮೇಲೆ ಯಾವುದೇ ಮಳಿಗೆ ಹಾಗೂ ಅನಧಿಕೃತವಾಗಿ ಹೆಚ್ಚುವರಿ ವಸ್ತುಗಳನ್ನು ಇಟ್ಟರೆ ಕೂಡಲೇ ಅವರ ಮೇಲೆ ಕ್ರಮಕೈಗೊಳ್ಳುವ ಬಗ್ಗೆ ಚರ್ಚಿಸಲಾಯಿತ್ತು.
- ಶ್ರೀ ಡೇವಿಡ್ ಫರ್ನಾಂಡಿಸ್, ವಸತಿ ಸೇವಾಭಿವೃದ್ಧಿ ಸಂಘ ಸದಸ್ಯರು ಮಾತನಾಡುತ್ತಾ, ಕನಕನಗರದ 8ನೇ ಕ್ರಾಸ್ ನ ರಸ್ತೆಯಲ್ಲಿ ಒಣ ಮರಗಳಿರುವುದರಿಂದ ಕೂಡಲೇ ಅರಣ್ಯ ಇಲಾಖೆಯವರಿಗೆ ತಿಳಿಸಿ ಒಣ ಮರಣಗಳನ್ನು ಶೀಘ್ರವಾಗಿ ತೆರವುಗೊಳಿಸುವಂತೆ ತಿಳಿಸಿದರು.

* ನೋಡೆಲ್ ಅಧಿಕಾರಿಗಳು ಮಾತನಾಡುತ್ತಾ, ಕಂದಾಯ ಇಲಾಖೆಯವರು ಮತ್ತು ಆರೋಗ್ಯ ಇಲಾಖೆಯವರು ಜೊತೆಯಾಗಿ ವ್ಯಾಷಿನೇಶನ್ ಹಾಕುವ ಬಗ್ಗೆ ಹಾಗೂ ಇನ್ನಿತರ ಕಾರ್ಯ ವಿಧಾನಗಳ ಬಗ್ಗೆ ಜಂಟಿಯಾಗಿ ಕಾರ್ಯನಿರ್ವಹಿಸುವಂತೆ ಸಭೆಗೆ ಹಾಜರಿದ್ದ ಸದಸ್ಯರಿಗೆ ತಿಳಿಸಲಾಯಿತ್ತು.

ಅಂತಿಮವಾಗಿ ಮೇಲ್ಕಂಡ ಎಲ್ಲಾ ವಿಷಯವನ್ನು ಚರ್ಚಿಸಲಾಗಿ ಹಾಗೂ ಚರ್ಚಿಸಿದ ವಿಷಯಗಳು ಬಗ್ಗೆ ಅಧಿಕಾರಿಗಳು ಮುಂದಿನ ವಾರ್ಡ್ ಸಮತಿ ಸಭೆಗೆ ಸಂಬಂಧಿಸಿದ ಅಧಿಕಾರಿಗಳು ಕೈಗೊಂಡಕ್ರಮದ ಬಗ್ಗೆ ವರದಿ ಪೂರ್ಣಗೊಂಡ ಭಾವಚಿತ್ರ ಹಾಗೂ ಲಿಖಿತ ವರದಿ ತಯಾರಿಸಿಕೊಂಡು ಹಾಜರಾಗಲು ಸೂಚಿಸಿ ಹಾಗೂ ಹಾಜರಾಗದೆ ಇರುವ ಅಧಿಕಾರಿಗಳು ಮುಂದಿನ ಸಭೆಯಲ್ಲಿ ಹಾಜರಾಗಿರಬೇಕೆಂದು ಸೂಚಿಸಿದರು. ಸಭೆಯನ್ನು ಅಧ್ಯಕ್ಷರ ಅಪ್ಪಣೆ ಮೇರೆಗೆ ವಾರ್ಡ್ ಸಮತಿ ಕಾರ್ಯದರ್ಶಿಗಳಾದ ಗುರುಸಿದ್ದಪ್ಪ .ಜಿ ರವರ ವಂದನಾರ್ಪಣೆಯೊಂದಿಗೆ ಮಧ್ಯಾಹ್ನ 12:45ಕ್ಕೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

| | |
|---|---|
| **(ಶ್ರೀ. ರಾಮಕೃಷ್ಣರೆಡ್ಡಿ)** | **(ಗುರುಸಿದ್ದಪ್ಪ .ಜಿ)** |
| **ನೋಡೆಲ್ ಅಧಿಕಾರಿಗಳು** | **ವಾರ್ಡ್ ಸಮಿತಿ ಕಾರ್ಯದರ್ಶಿ** |
| **ಹಾಗೂ** | **ಹಾಗೂ** |
| **ವಾರ್ಡ್ ಸಮಿತಿ ಅಧ್ಯಕ್ಷರು** | **ಸಹಾಯಕ ಅಭಿಯಂತರರು ವಾರ್ಡ್ ನಂ:22** |